**ಕರ್ನಾಟಕ ಸರ್ಕಾರ**

ನಂ.ಗ್ರಾಅಪ/263/ಗ್ರಾಪಂಕಾ/2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 01-04-2017

**ಸುತ್ತೋಲೆ**

**ವಿಷಯ:** ಬಿಲ್‌ಕಲೆಕ್ಟರ್ ಇತ್ಯಾದಿ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಮುಂಬಡ್ತಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯುವ ಬಗ್ಗೆ.

**ಉಲ್ಲೇಖ:** ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸುತ್ತೋಲೆ ಸಂಖ್ಯೆ: ಸಿಆಸುಇ 182 ಸೆನೆನಿ 2011 ದಿನಾಂಕ:22-03-2017.

******

ಉಲ್ಲೇಖಿತ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆಯಲ್ಲಿ ದಿನಾಂಕ:27-04-1978ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೆಹಿಮ 1977ರ ಆದೇಶದನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ವೃಂದದ ಹುದ್ದೆಗಳಿಗೆ (ಗ್ರೂಪ್-ಎ ಕಿರಿಯ ಶ್ರೇಣಿಯವರೆಗೆ) ಮುಂಬಡ್ತಿಯಲ್ಲಿ ಮೀಸಲಾತಿಯನ್ನು ನೀಡಲಾಗುತ್ತಿದೆ. "The Karnataka Determination of Seniority of the Government Servants Promoted on the Basis of Reservation (to the posts in the Civil Services of the State) Act, 2002" ರ ಸೆಕ್ಷನ್ 4 ರನ್ವಯ ಮುಂಬಡ್ತಿ ಹೊಂದಿದ ವೃಂದದಲ್ಲಿ ಜೇಷ್ಠತೆಯನ್ನು ನಿಗದಿಪಡಿಸಲಾಗುತ್ತಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ:09-02-2017ರ ತೀರ್ಪಿನಲ್ಲಿ "The Karnataka Determination of Seniority of the Government Servants Promoted on the Basis of Reservation (to the posts in the Civil Services of the State) Act, 2002" ರ ಸೆಕ್ಷನ್ 3 ಮತ್ತು 4ನ್ನು "ultra vires Articles 14 and 16 of the Constitution" ಎಂದು ಆದೇಶಿಸಿರುತ್ತದೆ ಹಾಗೂ ಜೇಷ್ಠತಾ ಪಟ್ಟಿಯನ್ನು ಮೂರು ತಿಂಗಳೊಳಗಾಗಿ ಪರಿಷ್ಕರಿಸಲು ನಿರ್ದೇಶನ ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಎಲ್ಲಾ ವೃಂದದ ಹುದ್ದೆಗಳಿಗೂ ಮುಂದಿನ ಆರು ತಿಂಗಳ ಅವಧಿಗೆ ಮುಂಬಡ್ತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಎಲ್ಲಾ ನೇಮಕಾತಿ ಪ್ರಾಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತದೆ. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು ತಮ್ಮ ಆಡಳಿತ ವ್ಯಾಪ್ತಿಗೊಳಪಡುವ ಸ್ವಾಯತ್ತ ಸಂಸ್ಥೆಗಳು/ ವಿಶ್ವವಿದ್ಯಾಲಯಗಳು/ ಸಾರ್ವಜನಿಕ ಉದ್ದಿಮೆ / ಆಯೋಗ /ನಿಗಮ / ಮಂಡಳಿಗಳು/ ಸ್ಥಳೀಯ ಸಂಸ್ಥೆಗಳು ಮತ್ತು ಸರ್ಕಾರದಿಂದ ಅನುದಾನ ಪಡೆಯುವ ಸಂಸ್ಥೆಗಳಿಗೆ ಈ ಕುರಿತು ಸೂಕ್ತ ಸೂಚನೆಗಳನ್ನು ನೀಡುವಂತೆ ತಿಳಿಸಲಾಗಿದೆ.

ಆದುದರಿಂದ ಬಿಲ್‌ಕಲೆಕ್ಟರ್ ಇತ್ಯಾದಿ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದಕ್ಕೆ ಮತ್ತು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಮುಂದಿನ ಆರು ತಿಂಗಳ ಅವಧಿಗೆ ಮುಂಬಡ್ತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಉಪಕಾರ್ಯದರ್ಶಿಗಳಿಗೆ ಸೂಚಿಸಿದೆ.

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತಿಗಳು.

<u>ಪ್ರತಿ:</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1), ವಿಧಾನ ಸೌಧ, ಬೆಂಗಳೂರು.
4. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.